ಸಿ–೦೦ ಪಿ.ಎಂ.]

೧೯೮೬ರ ಕರ್ನಾಟಕ ವೃತ್ತಿಗಳು, ವ್ಯವಹಾರಗಳು ಮತ್ತು ಕಸಬುಗಳು ಮತ್ತು ಉದ್ಯೋಗಗಳ ತಿದ್ದುಪಡಿ ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ೧೯೮೬ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು ಮತ್ತು ಕಸಬುಗಳ ಮತ್ತು ಉದ್ಯೋಗಗಳ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ

''೧೯೮೬ರ ಕರ್ನಾಟಕ ವೃತ್ತಿಗಳು ವ್ಯವಹಾರಗಳು ಮತ್ತು ಕಸಬುಗಳು ಮತ್ತು ಉದ್ಯೋಗಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ರ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಂಬುಗಳು, ಮತ್ತು ಉದ್ಯೋಗಗಳ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

*** ಅಧ್ಯಕ್ಷರು.**—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೬ನೇ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ರ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ

''೧೯೮೬ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ)ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ(೪) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

---

* Annexure.